## MARCH 7,2025
## ALL INDIA RADIO- DHARWAD
## PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ರಾಜ್ಯದಲ್ಲಿ ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡಲಾಗುತ್ತಿದ್ದು, ದೇಶದ ಜಿಡಿಪಿಗೆ ಕೃಷಿ ಕ್ಷೇತ್ರವು ಹೆಚ್ಚಿನ ಕೊಡುಗೆ ನೀಡುತ್ತಿದೆ. ರಾಜ್ಯವು ನವ ಹಾಗೂ ನವೀಕರಿಸಬಹುದಾದ ಇಂಧನ ಶಕ್ತಿ ಉತ್ಪಾದನೆಯಲ್ಲಿ ದೇಶಕ್ಕೆ ಪ್ರಥಮ ಸ್ಥಾನದಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ಹಣಕಾಸು ಖಾತೆಯನ್ನು ಹೊಂದಿರುವ ಅವರು ಇಂದು ವಿಧಾನಸಭೆಯಲ್ಲಿ 2025–26 ನೇ ಸಾಲಿನ ಮುಂಗಡ ಪತ್ರವನ್ನು ಮಂಡಿಸಿ, ಮಾತನಾಡಿದರು. 2025–26ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಯಾಂತ್ರೀಕರಣ ಕಾರ್ಯಕ್ರಮದಡಿ 50 ಸಾವಿರ ರೈತರಿಗೆ ಸಹಾಯಧನ ಒದಗಿಸಲು 428 ಕೋಟಿ ರೂಪಾಯಿ ಅನುದಾನ ಕಲ್ಪಿಸಲಾಗುವುದು. ಮಳೆಯಾಶ್ರಿತ ಪ್ರದೇಶದಲ್ಲಿ ಕೃಷಿ ಉತ್ಪಾದನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ, ಅಂದಾಜು 1 ಲಕ್ಷದ 81 ಸಾವಿರ ರೈತರಿಗೆ ಹನಿ ಮತ್ತು ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ 440 ಕೋಟಿ ರೂಪಾಯಿ ಸಹಾಯಧನವನ್ನು ಒದಗಿಸಲಾಗುವುದು ಎಂದರು. ತೊಗರಿ ಬೆಳೆಯಲ್ಲಿ ನೂತನ ತಾಂತ್ರಿಕತೆಗಳ ಅಳವಡಿಕೆ, ಕ್ಷೇತ್ರ ವಿಸ್ತರಣೆ ಮತ್ತು ತೊಗರಿಯನ್ನು ಅಂತರ ಬೆಳೆಯನ್ನಾಗಿ ಪ್ರೋತ್ಸಾಹಿಸುವುದರ ಮೂಲಕ ತೊಗರಿ ಉತ್ಪಾದನೆಯಲ್ಲಿ ಕರ್ನಾಟಕವನನ್ನು ರಾ ್ಟ್ರದಲ್ಲೇ ಮುಂಚೂಣಿ ರಾಜ್ಯವನ್ನಾಗಿಸಲು ಉದ್ದೇಶಿಸಲಾಗಿದೆ. ಈ ಯೋಜನೆಗೆ 88 ಕೋಟಿ ರೂಪಾಯಿ ಒದಗಿಸಲಾಗುವುದು ಎಂದರು. ರಾಜ್ಯದಲ್ಲಿ 6,000 ಕಿರು ಆಹಾರ ಸಂಸ್ಕರಣಾ ಘಟಕಗಳು ಹಾಗೂ 14 ಸಾಮಾನ್ಯ ಇನ್‌ಕ್ಯೂಬೇ ್ನ್ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ 5,000 ಕಿರು ಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಕ್ರಮವಹಿಸಲಾಗುವುದು ಎಂದರು.**

<><><>

**ಮೈಸೂರು ಆಕಾಶವಾಣಿ ಕೇಂದ್ರವು ಸ್ಥಾಪನೆಗೊಂಡು, ಕಾರ್ಯಾರಂಭಿಸಿ 90 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಇಂದು ನುಡಿ, ನಾದ, ಸಂಗಮ ಕಾರ್ಯಕ್ರಮವು ಆಯೋಜಿತವಾಗಿದೆ. 1935 ರಲ್ಲಿ ಯಾದವಗಿರಿಯಲ್ಲಿ ಆರಂಭಗೊಂಡ ಈ ಕೇಂದ್ರವು ಸ್ವಾತಂತ್ರ್ಯಪೂರ್ವದಲ್ಲಿ ಆರಂಭಗೊಂಡ ಕನ್ನಡ ನಾಡಿನ ಪ್ರಥಮ ಬಾನುಲಿ ಕೇಂದ್ರವೆಂಬ ಹಿರಿಮೆ ಹೊಂದಿದೆ. ಆಕಾಶವಾಣಿ ಕೇಂದ್ರದ ನುಡಿ, ನಾದ, ಸಂಗಮ ಕಾರ್ಯಕ್ರಮದ ಅಂಗವಾಗಿ ಮೈಸೂರಿನ ಕೋಟೆ ಆಂಜನೇಯ ಸ್ವಾಮಿ ದೇವಾಲಯ ಮುಂಭಾಗದಲ್ಲಿ, ಇಂದು ಮುಂಜಾನೆ ಆಯೋಜಿಸಲಾದ ಸೈಕಲ್ ಜಾಥಾಕ್ಕೆ ನವದೆಹಲಿ ಅಕಾಶವಾಣಿ ಸುದ್ದಿ ವಿಭಾಗದ ಮಹಾನಿರ್ದೇಶಕಿ ಡಾಕ್ಟರ ಪ್ರಜ್ಞಾ ಪಾಲೀವಾಲ್ ಗೌರ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ, ಮಾತನಾಡಿದರು.**

<><><>

**ಬೈಟ್: ಪ್ರಜ್ಞಾ ಪಾಲೀವಾಲ್ 32 ಸೆಕೆಂದುಗಳು**

<><><>

**ಆಯುಷ್ಮಾನ್ ಭಾರತ್ ಯೋಜನೆಯು ಸಾಮಾನ್ಯ ಜನರಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಗಳನ್ನು ನೀಡಲು ಮಹತ್ವದ ಪಾತ್ರವಹಿಸಿದೆ. ಆದರೆ, ಈ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಹೆಚ್ಚಿನ ಆದ್ಯತೆ ಮತ್ತು ಅನುದಾನವನ್ನು ನೀಡಬೇಕೆಂದು ವಿಧಾನಸಭೆ ಪ್ರತಿಪಕ್ಷ ಉಪನಾಯಕ ಅರವಿಂದ ಬೆಲ್ಲದ ಆಗ್ರಹಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕಳೆದ ಜನವರಿಯಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿ ಚಿಕಿತ್ಸೆ ನಿರಾಕರಿಸಿದ್ದರಿಂದ ಮನನೊಂದು ಕ್ಯಾನ್ಸರ್ ಪೀಡಿತ 72 ವರ್ಷದ ವ್ಯಕ್ತಿಯೊಬ್ಬರು ಬೆಂಗಳೂರಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದು ಮನಕಲುಕುವ ವಿಚಾರ. ಇಂತಹ ಪ್ರಕರಣಗಳು ಮತ್ತೊಮ್ಮೆ ಮರುಕಳಿಸದಂತೆ ರಾಜ್ಯ ಸರ್ಕಾರ ಎಚ್ಚರ ವಹಿಸಬೇಕು. PMJAY ಅಡಿ ಚಿಕಿತ್ಸೆ ನಿರಾಕರಿಸುವ ಆಸ್ಪತ್ರೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.**

<><><>

**ಕರ್ನಾಟಕ ರಾಜ್ಯ ಪತ್ರಕರ್ತರ ಸಂಘದ ವಾರ್ಷಿಕ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭವು ಕೊಪ್ಪಳದ ಕಟಾರೆ ಕಲ್ಯಾಣ ಮಂಟಪದಲ್ಲಿ 9 ನೇ ತಾರೀಖಿನಂದು ಮಧ್ಯಾಹ್ನ 1 ಗಂಟೆಗೆ ನಡೆಯಲಿದೆ ಎಂದು ಕೆ.ಯು.ಡಬ್ಲ್ಯು.ಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದರು. ಕೊಪ್ಪಳದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.**

<><><>

**ಕೊಡಗು ಜಿಲ್ಲೆ ಮಡಿಕೇರಿಯ, ಕೊಡವ ಪಾರಂಪರಿಕ ಕೇಂದ್ರದ ಕಾಮಗಾರಿಯನ್ನು, ಸಾರ್ವಜನಿಕರು, ಖಾಸಗಿ ಸಹಭಾಗಿತ್ವದ, 'ಟ್ರಿಪಲ್ ಪಿ' ಮಾದರಿಯಲ್ಲಿ ಅಭಿವೃದ್ಧಿ ಪಡಿಸಿ, ಮುಂಬರುವ ಆರ್ಥಿಕ ವರ್ಷದೊಳಗೆ ಪೂರ್ಣಗೊಳಿಸುವುದಾಗಿ, ಪ್ರವಾಸೋದ್ಯಮ ಖಾತೆ ಸಚಿವ, ಎಚ್.ಕೆ. ಪಾಟೀಲ, ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ, ಶಾಸಕ ಸುಜಾ ಕುಶಾಲಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವರು, ಉತ್ತರಿಸಿದರು. ಕೊಡವ ಹೆರಿಟೇಜ್ ಕೇಂದ್ರದ ಕಾಮಗಾರಿಯನ್ನು 330 ಲಕ್ಷ 45 ಸಾವಿರ ರೂಪಾಯಿ ವೆಚ್ಚದಲ್ಲಿ ಪೂರ್ಣ ಗೊಳಿಸಲು, ಆಡಳಿತಾತ್ಮಕ ಅನುಮೋದನೆ ನೀಡಿ, ಹಣ ಬಿಡುಗಡೆ ಮಾಡಲಾಗಿದೆ ಎಂದರು.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**